# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೧<br>Part – I | ಬೆಂಗಳೂರು, ಶನಿವಾರ, ೦೬ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೫, ಶಕವರ್ಷ ೧೯೪೭)<br>BENGALURU, SATURDAY, 06 SEPTEMBER, 2025 (BHADRAPADA 15, SHAKAVARSHA 1947) | ನಂ. ೫೪೪<br>No. 544 |


**<u>ಕರ್ನಾಟಕ ಸರ್ಕಾರ</u>**

ಸಂಖ್ಯೆ: ಸಿಆಸುಇ 388 ಸೇನೆನಿ 2024.

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:06.09.2025

**<u>ಸುತ್ತೋಲೆ</u>**

**ವಿಷಯ:** ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊರಡಿಸಲಾಗಿದ್ದ ಅಧಿಸೂಚನೆಗಳನ್ನು ತಡೆಹಿಡಿಯಲು ಸೂಚನೆಗಳನ್ನು ನೀಡಿ ಹೊರಡಿಸಲಾಗಿದ್ದ ಸುತ್ತೋಲೆಗಳನ್ನು ಹಿಂಪಡೆಯುವ ಕುರಿತು.

**ಉಲ್ಲೇಖ:**
1. ದಿನಾಂಕ 25.11.2024 ರ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024.
2. ದಿನಾಂಕ 29.03.2025 ರ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೇನೆನಿ 2024.
3. ದಿನಾಂಕ 11.04.2025 ರ ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೇನೆನಿ 2024.
4. ದಿನಾಂಕ 25.08.2025 ರ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 8 ಎಸ್‌ಎಲ್‌ಪಿ 2024.

*******

1. ಉಲ್ಲೇಖಿತ (1) ರ ದಿನಾಂಕ 25.11.2024 ರ ಸುತ್ತೋಲೆಯಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ದಿನಾಂಕ 28.10.2024ರಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆವಿಗೂ ಹೊರಡಿಸಬಾರದೆಂದು ಸೂಚಿಸಲಾಗಿತ್ತು. ಮುಂದುವರೆದು, ಈ ರೀತಿ ಸುತ್ತೋಲೆ ಹೊರಡಿಸಿದ ನಂತರವೂ ನೇರ ನೇಮಕಾತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ, ಉಲ್ಲೇಖಿತ (2) ರ ದಿನಾಂಕ 29.03.2025 ರ ಸುತ್ತೋಲೆಯಲ್ಲಿ ದಿನಾಂಕ 25.11.2024ರ ನಂತರ ನೇರ ನೇಮಕಾತಿಗೆ ಯಾವುದೇ ಹೊಸ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅವುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಆಯಾಯ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿತ್ತು.

2. ಮುಂದುವರಿದು, ದಿನಾಂಕ 25.11.2024 ರಲ್ಲಿನ ಸೂಚನೆಗಳು ದಿನಾಂಕ 28.10.2024 ರಿಂದಲೇ ಅನ್ವಯವಾಗುವುದರಿಂದ ದಿನಾಂಕ 28.10.2024 ರ ನಂತರ ನೇರ ನೇಮಕಾತಿಗಾಗಿ ಅಥವಾ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗಾಗಿ ಯಾವುದೇ ಹೊಸ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ, ಈ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಆಯಾಯ ನೇಮಕಾತಿ ಪ್ರಾಧಿಕಾರಗಳಿಗೆ ಉಲ್ಲೇಖಿತ (3) ರ ದಿನಾಂಕ 11.04.2025 ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ.

3. ಉಲ್ಲೇಖಿತ (4) ರ ದಿನಾಂಕ 25.08.2025 ರ ಆದೇಶದಲ್ಲಿ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಅಗತ್ಯ ಮಾರ್ಪಾಡುಗಳೊಂದಿಗೆ ಅಂಗೀಕರಿಸಿ, ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳನ್ನು 5 ಪ್ರವರ್ಗಗಳ ಬದಲಾಗಿ ಪ್ರವರ್ಗ- ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಎಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶೇಕಡ 17 ರಷ್ಟು ಮೀಸಲಾತಿಯನ್ನು ಪ್ರವರ್ಗ- ಎ ರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು, ಪ್ರವರ್ಗ-ಬಿ ರಲ್ಲಿನ ಸಮುದಾಯಗಳಿಗೆ ಶೇಕಡ 6 ರಷ್ಟು ಮತ್ತು ಪ್ರವರ್ಗ -ಸಿ ರಲ್ಲಿನ ಸಮುದಾಯಗಳಿಗೆ ಶೇಕಡ 5 ರಷ್ಟು ನಿಗದಿಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಲಾಗಿರುತ್ತದೆ.

4. ಮೇಲ್ಕಂಡ ಬೆಳವಣಿಗೆಗಳ ಹಿನ್ನಲೆಯಲ್ಲಿ, ಒಳಮೀಸಲಾತಿ ಜಾರಿಯಾಗುವವರೆಗೆ ಯಾವುದೇ ನೇರ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳದಂತೆ ಸೂಚನೆಗಳನ್ನು ನೀಡಿ ಕ್ರಮವಾಗಿ, ದಿನಾಂಕ 25.11.2024 ರ, ದಿನಾಂಕ 29.03.2025 ರ ಮತ್ತು ದಿನಾಂಕ 11.04.2025 ರಂದು ಹೊರಡಿಸಲಾಗಿದ್ದ, ಉಲ್ಲೇಖಿತ (1), (2) ಮತ್ತು (3) ರಲ್ಲಿನ ಸುತ್ತೋಲೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ,

(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH